REGISTERED WITH RNI NEW DELHI REG. N0.69683/97-Postal Registration No.RNP/KA/BGS/2259/2024-2026
Office of Posting: Bangalore PSO, Bangalore - 560026.; Date of Posting & Publishing Every Wednesday; Price Rs. 2 (Pages-8)

ಪಟ್ಟಣ ಸಹಕಾರ ಬ್ಯಾಂಕುಗಳ

# ವಾರ್ತಾ ಪತ್ರಿಕೆ

ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳದ ಅಧಿಕೃತ ಕನ್ನಡ ವಾರಪತ್ರಿಕೆ

ಸಂಪುಟ : 31 । ಸಂಚಿಕೆ : 49 । 12 ಮಾರ್ಚ್ 2025 । ಬುಧವಾರ । ಪುಟಗಳು : 8 । ಬೆಲೆ : 2/-

## 2025-26ನೇ ಸಾಲಿನ ರಾಜ್ಯ ಬಜೆಟ್

## ಸಹಕಾರ ಇಲಾಖೆಯಲ್ಲಿ ಕಾರ್ಯಕ್ಷಮತೆ, ಪಾರದರ್ಶಕತೆ ಹಾಗೂ ಜನಸ್ನೇಹಿ ಸೇವೆಗಳನ್ನು ನೀಡುವ ಸಲುವಾಗಿ ಸುಧಾರಣಾ ಕ್ರಮಗಳ ಜಾರಿಗೆ ತರಲಾಗುವುದು



**ಬೆಂಗಳೂರು :** 2025–26ನೇ ಸಾಲಿನ ರಾಜ್ಯ ಬಜೆಟ್ 4,09,549 ಲಕ್ಷ ಕೋಟಿ ರೂಪಾಯಿ ಗಾತ್ರದ ಬಜೆಟ್ ಅನ್ನು ಕಳೆದ ಸಾರಿಯಂತೆ ಈ ಬಾರಿಯೂ ವಲಯವಾರು ವಿಂಗಡಣೆ ಮಾಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡನೆ ಮಾಡಿದ್ದಾರೆ. ಈವರೆವಿಗೂ ಸಿದ್ದರಾಮಯ್ಯ ಅವರು ಒಟ್ಟು 16 ಬಜೆಟ್‌ಗಳನ್ನು ಮಂಡಿಸಿದ್ದು, ದಾಖಲೆಯನ್ನು ನಿರ್ಮಿಸಿದ್ದಾರೆ.

ಬಜೆಟ್ ಮಂಡನೆಯಲ್ಲಿ ಸಹಕಾರ ಇಲಾಖೆಗೆ ನೀಡಲಾದ ಕೊಡುಗೆಗಳ ಬಗ್ಗೆ ಪ್ರಸ್ತಾಪಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಹಕಾರ ಇಲಾಖೆಯಲ್ಲಿ ಕಾರ್ಯಕ್ಷಮತೆ, ಪಾರದರ್ಶಕತೆ ಹಾಗೂ ಜನಸ್ನೇಹಿ ಸೇವೆಗಳನ್ನು ನೀಡಲು ಸುಧಾರಣಾ ಕ್ರಮಗಳ ಜಾರಿಗೆ ತರುವುದಾಗಿ ಘೋಷಿಸಿದ್ದಾರೆ. ನಬಾರ್ಡ್ ರಿಯಾಯತಿ ಬಡ್ಡಿ ದರದಲ್ಲಿ ನೀಡುವ ಪುನರ್ಧನದ ಮಿತಿಯನ್ನು ಶೇ. 58ರಷ್ಟು ಕಡಿಮೆ ಮಾಡಿದ್ದರೂ ನಿಗದಿತ ಗುರಿಯನ್ನು ಸಾಧಿಸಲು ನಾವು ಬದ್ಧರಾಗಿದ್ದೇವೆ. ಪ್ರಸಕ್ತ ಸಾಲಿನಲ್ಲಿ 37 ಲಕ್ಷ ರೈತರಿಗೆ 28,000 ಕೋಟಿ ರೂ. ಸಾಲವನ್ನು ವಿತರಿಸುವ ಗುರಿಯನ್ನು ಹೊಂದಲಾಗಿದೆ ಎಂದು ತಿಳಿಸಿದ್ದಾರೆ.

ಮುಂದುವರಿದು ಮಾತನಾಡುತ್ತಾ, 2024–25ನೇ ಸಾಲಿನಲ್ಲಿ 21.78 ಲಕ್ಷ ರೈತರಿಗೆ 18,960 ಕೋಟಿ ರೂ. ಕೃಷಿ ಸಾಲ ವಿತರಿಸಲಾಗಿದೆ ಎಂದು ತಿಳಿಸಿದ್ದಾರೆ. ಪ್ರಸಕ್ತ ಸಾಲಿನಲ್ಲಿ 37 ಲಕ್ಷ ರೈತರಿಗೆ 28,000 ಕೋಟಿ ರೂ. ಸಾಲವನ್ನು ವಿತರಿಸುವ ಗುರಿಯನ್ನು ಹೊಂದಲಾಗಿದೆ ಎಂದು ತಿಳಿಸಿದ್ದಾರೆ.

**ಸಹಕಾರ ಕ್ಷೇತ್ರಕ್ಕೆ ನೀಡಲಾದ ಕೊಡುಗೆಗಳ ಮಾಹಿತಿ:**

- 2023–24ನೇ ಸಾಲಿನ ಬೆಳಗಾವಿ ಅಧಿವೇಶನದಲ್ಲಿ ಘೋಷಿಸಿದಂತೆ, ಡಿಸಿಸಿ ಹಾಗೂ ಪಿಕಾರ್ಡ್ ಬ್ಯಾಂಕುಗಳಿಗೆ ಸಂಬಂಧಿಸಿದ ಮಧ್ಯಮಾವಧಿ ಮತ್ತು ದೀರ್ಘಾವಧಿ ಸುಸ್ತಿ ಸಾಲಗಳ ಮೇಲಿನ 240 ಕೋಟಿ ರೂ. ಬಡ್ಡಿಯನ್ನು ಮನ್ನಾ ಮಾಡಲಾಗಿದೆ.
- ಯಶಸ್ವಿನಿ ಯೋಜನೆಯಡಿ ಇಲ್ಲಿಯವರೆಗೆ 700 ನೆಟ್‌ವರ್ಕ್ ಆಸ್ಪತ್ರೆಗಳು ನೋಂದಣಿಯಾಗಿದ್ದು, ಈ ಆಸ್ಪತ್ರೆಗಳಲ್ಲಿ ಇದುವರೆಗೂ ರಾಜ್ಯಾದ್ಯಂತ 59,000 ಫಲಾನುಭವಿಗಳು 103 ಕೋಟಿ ರೂ. ಮೊತ್ತದ ಚಿಕಿತ್ಸೆ ಪಡೆದಿದ್ದಾರೆ.
- ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಕೇಂದ್ರ ಪುರಸ್ಕೃತ ಗಣಕೀಕರಣ ಯೋಜನೆಯಡಿ 93 ಕೋಟಿ ರೂ.ಗಳಷ್ಟು ಬಿಡುಗಡೆ ಮಾಡಿ, ರಾಜ್ಯದಲ್ಲಿ 110 ಸಂಘಗಳ ಗಣಕೀಕರಣವನ್ನು ಪೂರ್ಣಗೊಳಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ, 3,000 ಸಂಘಗಳನ್ನು ಸಂಪೂರ್ಣವಾಗಿ ಗಣಕೀಕರಣಗೊಳಿಸಲು ಉದ್ದೇಶಿಸಲಾಗಿದೆ.
- ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಗೆ ಪ್ರತಿ ಕ್ವಿಂಟಾಲ್‌ಗೆ 7,550 ರೂ. ಜತೆಗೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿ ಪ್ರೋತ್ಸಾಹಧನ 450 ರೂ.ಗಳಂತೆ ಒಟ್ಟು 138 ಕೋಟಿ ರೂ. ನೀಡಲು ತೀರ್ಮಾನಿಸಲಾಗಿದೆ. ಇದರಿಂದ, ತೊಗರಿ ಬೆಳೆಯುವ ಪ್ರಮುಖ ಜಿಲ್ಲೆಗಳಾದ ಕಲಬುರಗಿ,

ಪುಟಕ್ಕೆ...

4 ಕರ್ನಾಟಕವನ್ನು ದೇಶದ ನಂ.1 ಆರ್ಥಿಕತೆಯನ್ನಾಗಿ ಮಾಡುವತ್ತ ದಿಟ್ಟ ಹೆಜ್ಜೆ : ಸಿದ್ದರಾಮಯ್ಯ
5 ತ್ಯಾಗರಾಜ ಕೋ-ಆಪರೇಟಿವ್ ಬ್ಯಾಂಕ್ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ : ಆರ್. ಅಶೋಕ್, ವಿಧಾನಸಭೆ ವಿರೋಧ ಪಕ್ಷದ ನಾಯಕ
7 ನಿಮ್ಮ ಪ್ರಶ್ನೆ - ನಮ್ಮ ಉತ್ತರ

## ಸಂಪಾದಕೀಯ

## ಆತ್ಮೀಯ ಸಹಕಾರಿಗಳೇ...



# ಗ್ಯಾರೆಂಟಿ ಯೋಜನೆಗಳು ಅಭೂತಪೂರ್ವ ಯಶಸ್ಸು ಕಂಡಿರುವ ಫಲವೇ ಈ ಬಜೆಟ್

ಈ ಬಾರಿ ಮಂಡನೆಯಾದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಜೆಟ್ ಮೇಲೆ ಎಲ್ಲರ ಚಿತ್ತ ನೆಟ್ಟಿತ್ತು. ಅದಕ್ಕೆ ಕಾರಣವೂ ಇತ್ತು. ರಾಜ್ಯ ಸರ್ಕಾರ ಚುನಾವಣೆ ಸಂದರ್ಭದಲ್ಲಿ ಕೊಟ್ಟ ಮಾತಿನಂತೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದರಿಂದ ರಾಜ್ಯ ಆರ್ಥಿಕವಾಗಿ ದಿವಾಳಿಯಾಗಿದೆ ಎಂದು ಅನೇಕರು ಹುಯಿಲೆಬ್ಬಿಸುತ್ತಲೇ ಇದ್ದರು. ಅಲ್ಲದೆ ಈ ಬಾರಿಯ ಬಜೆಟ್‌ನಲ್ಲಿ ಆ ಗ್ಯಾರಂಟಿಗಳಿಗೆ ಹಣ ಮೀಸಲಿಡಲು ಸಾಧ್ಯವಿಲ್ಲವಾಗಿದೆ. ಅದನ್ನು ರದ್ದು ಮಾಡುವ ಸಾಧ್ಯತೆಯೇ ಹೆಚ್ಚು ಎಂದು ಕೆಲ ಪ್ರಭೂತಿಗಳು ಭವಿಷ್ಯ ನುಡಿಯುತ್ತಲೇ ಇದ್ದರು.

ನಿಜ, ಐದು ಗ್ಯಾರಂಟಿ ಯೋಜನೆಗಳನ್ನು ಮುಂದುವರೆಸಬೇಕಾದ, ಅದಕ್ಕಾಗಿ ಅನುದಾನ ಮೀಸಲಿಡಬೇಕಾದ ಒತ್ತಡ ಸರ್ಕಾರದ ಮೇಲಿತ್ತು. ಗ್ಯಾರಂಟಿ ಜೊತೆಗೆ ರಾಜ್ಯದ ಆರ್ಥಿಕತೆ ಪ್ರಗತಿಗೆ, ಅಭಿವೃದ್ಧಿಗೆ ಸಾಮಾಜಿಕ ಏಳಿಗೆಗೆ ಕೊಡುಗೆ ನೀಡುವಂತ ಯೋಜನೆಗಳನ್ನೂ ಬಜೆಟ್‌ನಲ್ಲಿ ಮಂಡಿಸಬೇಕಾದ್ದು ಅವಶ್ಯವಿತ್ತು. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಲ್ಲರ ನಿರೀಕ್ಷೆಯನ್ನು ಮೀರಿದ ಅದ್ಭುತ ಎನ್ನಬಹುದಾದ ಬಜೆಟ್ ಮಂಡಿಸಿ ಟೀಕಾಕಾರರ ಬಾಯಿ ಬಂದ್ ಮಾಡಿಸಿದ್ದಾರೆ ಎನ್ನುಬಹುದಾಗಿದೆ.

ಅದಕ್ಕಿಂತಲೂ ಹೆಚ್ಚಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್ ಎನ್ನುವುದು ಬರಿ ಹಾಳೆಗಳ ಮೇಲಿನ ಲೆಕ್ಕವಲ್ಲ, ರಾಜ್ಯದ ಏಳು ಕೋಟಿ ಕನ್ನಡಿಗರ ಭವಿಷ್ಯ ರೂಪಿಸುವ ಕೈಪಿಡಿ ಎನ್ನುವುದು ನನ್ನ ನಂಬಿಕೆ ಎಂದಿದ್ದರು. ಅದನ್ನು ತಾವು ಮೊನ್ನೆ ಮಂಡಿಸಿದ ಬಜೆಟ್‌ನಲ್ಲಿ ಸಾಕಾರಗೊಳಿಸಿದ್ದಾರೆ. ರೈತ, ಕಾರ್ಮಿಕ, ಶೋಷಿತ, ಅಲ್ಪಸಂಖ್ಯಾತ, ಹಿಂದುಳಿದ ವರ್ಗಗಳ ಹಾಗೂ ಪಕ್ಷಾತೀತವಾಗಿ ಸಮಾಜದ ಎಲ್ಲಾ ಜಾತಿ, ಜನಾಂಗ, ವರ್ಗದ ಜನರ ಆಶೋತ್ತರಗಳನ್ನು ಸಕಾರಾತ್ಮಕವಾಗಿ ಸ್ಪಂದಿಸುವ ಪ್ರಯತ್ನವನ್ನು ಅವರು ತಮ್ಮ ಬಜೆಟ್‌ನಲ್ಲಿ ಮಾಡಿರುವುದನ್ನು ಕಾಣಬಹುದಾಗಿದೆ.

ಈ ಬಜೆಟ್‌ನಲ್ಲಿ ನನಗೆ ಕಂಡ ವಿಶೇಷವೆಂದರೆ, ರಾಜ್ಯದ ಎಲ್ಲಾ ಜನತೆಯ ನಿರೀಕ್ಷೆಯನ್ನು ಪುಷ್ಟೀಕರಿಸಿರುವುದು ಮಾತ್ರವಲ್ಲ; ಆರೋಗ್ಯ, ಶಿಕ್ಷಣ, ಸಾಮಾಜಿಕ ನ್ಯಾಯ, ರೈತ ಕೇಂದ್ರೀಕೃತ, ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ, ಮಹಿಳೆ, ಸಹಕಾರ ವಲಯವನ್ನು ಒಳಗೊಂಡಂತೆ ಎಲ್ಲಾ ಕ್ಷೇತ್ರಗಳಿಗೂ ವಿಶೇಷ ಒತ್ತು ನೀಡಿರುವುದು ಮುಖ್ಯಮಂತ್ರಿಗಳ ಸಾಮಾಜಿಕ ಬದ್ಧತೆ, ಆರ್ಥಿಕ ಕ್ಷೇತ್ರದಲ್ಲಿನ ವಿಶೇಷ ಅನುಭವ ಹಾಗೂ ಪ್ರಬುದ್ಧತೆಗೆ ಹಿಡಿದ ಕೈಗನ್ನಡಿಯಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಹಕಾರ ಇಲಾಖೆಯಲ್ಲಿ ಕಾರ್ಯಕ್ಷಮತೆ, ಪಾರದರ್ಶಕತೆ ಹಾಗೂ ಜನಸ್ನೇಹಿ ಸೇವೆಗಳನ್ನು ನೀಡಲು ಸುಧಾರಣಾ ಕ್ರಮಗಳ ಜಾರಿಗೆ ತರುವುದಾಗಿ ಘೋಷಿಸಿದ್ದಾರೆ. ಸಹಕಾರ ಸಂಘಗಳ ಲೆಕ್ಕ ಪರಿಶೋಧನೆ ವರದಿಗಳನ್ನು ಡಿಜಿಟಲೀಕರಣಗೊಳಿಸುವುದು ಹಾಗೂ ಸಹಕಾರ ಬ್ಯಾಂಕಿನ ಠೇವಣಿದಾರರ ಹಿತಾಸಕ್ತಿಯನ್ನು ಕಾಪಾಡಲು ಹಾಗೂ ಅವ್ಯವಹಾರವನ್ನು ತಡೆಯಲು ಸಹಾಯವಾಣಿಯನ್ನು ಪ್ರಾರಂಭಿಸಲಾಗುವುದು ಎಂದು ಘೋಷಿಸಿದ್ದಾರೆ. ನಬಾರ್ಡ್ ರಿಯಾಯತಿ ಬಡ್ಡಿ ದರದಲ್ಲಿ ನೀಡುವ ಪುನರ್ಧನದ ಮಿತಿಯನ್ನು ಕಡಿಮೆ ಮಾಡಿದ್ದರೂ, ನಿಗದಿತ ಗುರಿಯಂತೆ ರೈತರಿಗೆ ಪ್ರಸಕ್ತ ಸಾಲಿನಲ್ಲಿ ಸಾಲವನ್ನು ವಿತರಿಸುವ ಗುರಿಯನ್ನು ಹೊಂದಲಾಗಿದೆ.

ಒಟ್ಟಾರೆ ಹೇಳುವುದಾದರೆ, ಐದು ಗ್ಯಾರೆಂಟಿ ಯೋಜನೆಗಳು ಅಭೂತಪೂರ್ವ ಯಶಸ್ಸು ಕಂಡಿರುವ ಫಲವೇ ಈ ಬಜೆಟ್ ಎಂದು ಹೇಳಬಯಸುತ್ತೇನೆ.

▸▸ ಎಚ್.ಕೆ. ಪಾಟೀಲ

## ಹಣದುಬ್ಬರ ಪ್ರಮಾಣ ಇಳಿಕೆ ಮತ್ತೆ ರೆಪೊ ದರ ಕಡಿತ ಸಾಧ್ಯತೆ



**ನವದೆಹಲಿ :** ಜನವರಿಯಲ್ಲಿ ಹಣದುಬ್ಬರ ಪ್ರಮಾಣ ಶೇಕಡ 5.22ರಿಂದ ಶೇಕಡ 4.31 ಕ್ಕೆ ಇಳಿಕೆಯಾಗಿದೆ, 4 ತಿಂಗಳ ನಂತರ ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಗೊತ್ತುಪಡಿಸಿದ ಶೇಕಡ 4ಕ್ಕೆ ಹಣದುಬ್ಬರ ಪ್ರಮಾಣ ಸಮೀಪಿಸುತ್ತಿರುವಂತೆ ಕಾಣುತ್ತಿದೆ. ಜಾಗತಿಕ ಆರ್ಥಿಕ ಪರಿಸ್ಥಿತಿ ಮತ್ತು ದೇಶದ ಆರ್ಥಿಕ ಬೆಳವಣಿಗೆಗಳನ್ನು ಗಮನಿಸಿದರೆ ಹಣದುಬ್ಬರ ಇಳಿಕೆಯ ಸೂಚನೆಗಳು ದಟ್ಟವಾಗಿವೆ.

ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಈಗಿರುವ ರೆಪೊ ದರವನ್ನು ಮತ್ತಷ್ಟು ಇಳಿಕೆ ಮಾಡುವ ಸೂಚನೆಗಳಿವೆ ಎಂದು ಮೋತಿಲಾಲ್ ಓಸ್ವಾಲ್ ಮ್ಯೂಚುವಲ್ ಫಂಡ್ ವರದಿ ತಿಳಿಸಿದೆ. ಫೆಬ್ರವರಿಯಲ್ಲಿ ಸೆನ್ಸೆಕ್ಸ್ ಮತ್ತು ನಿಫ್ಟಿ ಹೆಚ್ಚು ಕುಸಿತ ದಾಖಲಿಸಿದೆ, ಜಾಗತಿಕ ಮಾರುಕಟ್ಟೆಗಳಲ್ಲಿ ಮಿಶ್ರ ಚಲನೆ ಕಂಡುಬಂದಿದೆ ಅಮೆರಿಕದ ಹಣದುಬ್ಬರ ಶೇಕಡ 2.9 ರಿಂದ 3ಕ್ಕೆ ಏರಿಕೆಯಾಗಿದೆ. ಇಂತಹ ಬೆಳವಣಿಗೆ ನಡುವೆಯೂ ಭಾರತದ ಪರಿಸ್ಥಿತಿ ಚೇತರಿಸಿಕೊಳ್ಳಲಿದೆ ಮೂಲ ಸೌಕರ್ಯ ತಯಾರಿಕಾ ವಲಯದಲ್ಲಿ ಸರ್ಕಾರ ಮತ್ತು ಖಾಸಗಿ ಹೂಡಿಕೆ ಹೆಚ್ಚಳವಾಗಲಿದೆ.

ರಿಯಲ್ ಎಸ್ಟೇಟ್ ವಲಯ ಮತ್ತಷ್ಟು ಏರಿಕೆ ಕಾಣಲಿದೆ ನವೀಕರಿಸಬಹುದಾದ ಇಂಧನ, ಉನ್ನತ ತಂತ್ರಜ್ಞಾನ ಸ್ಥಳೀಕರಣದಿಂದ ವಿದೇಶಿ ನೇರ ಹೂಡಿಕೆ ಬಲವಾಗಲಿದೆ ಎಂದು ವರದಿ ಹೇಳಿದ ಆರ್‌ಬಿಐ ಮತ್ತೊಮ್ಮೆ ದರ ಕಡಿತಗೊಳಿಸಿದಲ್ಲಿ ಬ್ಯಾಂಕುಗಳ ಸಾಲದ ಮೇಲಿನ ಬಡ್ಡಿ ದರ ಇಳಿಕೆಯಾಗಲಿದ್ದು, ಸಾಲಗಾರರಿಗೆ ಇಎಂಐ ಹೊರೆ ಕಡಿಮೆಯಾಗಿ ಅನುಕೂಲವಾಗಲಿದೆ.

...1ನೇ ಪುಟದಿಂದ

## ಮಹಿಳೆಯರಿಗೆ ಅಕ್ಕ ಸಹಕಾರ ಸಂಘ




ಕೌಶಲ್ಯಾಭಿವೃದ್ಧಿ ಇಲಾಖೆಯ ಮೂಲಕ ಜಾರಿಗೆ ತರುವ ಕಾರ್ಯಕ್ರಮಗಳಲ್ಲಿ ರಾಷ್ಟ್ರೀಯ ಜೀವನೋಪಾಯ ಅಭಿಯಾನದ ಸ್ವಸಹಾಯ ಗುಂಪುಗಳ ಮಹಿಳೆಯರಿಗೆ ಜೀವನೋಪಾಯ ಚಟುವಟಿಕೆ ಕೈಗೊಳ್ಳಲು ತ್ವರಿತ ಸಾಲಸೌಲಭ್ಯ ಒದಗಿಸಿ, ಉಳಿತಾಯ ಮತ್ತು ಉದ್ಯಮಶೀಲತೆ ಹೆಚ್ಚಿಸುವ ಉದ್ದೇಶದಿಂದ ರಾಜ್ಯಮಟ್ಟದಲ್ಲಿ ಅಕ್ಕ ಕೋ-ಆಪರೇಟಿವ್ ಸೊಸೈಟಿ ಸ್ಥಾಪಿಸುವುದಾಗಿ ಘೋಷಿಸಿರುವ ಮುಖ್ಯಮಂತ್ರಿಗಳು "ಗೃಹಲಕ್ಷ್ಮಿ" ಯೋಜನೆಯ ಯಜಮಾನಿಯರನ್ನು ಸ್ವಸಹಾಯ ಗುಂಪುಗಳ ಸದಸ್ಯರುಗಳನ್ನಾಗಿಸಿ, ರಾಜ್ಯಮಟ್ಟದ ಅಕ್ಕ ಕೋ-ಆಪರೇಟಿವ್ ಸೊಸೈಟಿ ವ್ಯಾಪ್ತಿಗೆ ತರುವುದಾಗಿ ಹೇಳಿದ್ದಾರೆ.

ಮಹಿಳಾ ಸಬಲೀಕರಣಕ್ಕಾಗಿ ಗ್ರಾಮ ಪಂಚಾಯಿತಿ ಸ್ವಸಹಾಯ ಸಂಘಗಳ ಸಹಭಾಗಿತ್ವದಲ್ಲಿ ವಿವಿಧ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳಲು ಯೋಜನೆ ರೂಪಿಸಿರುವ ಮುಖ್ಯಮಂತ್ರಿಗಳು ಜಿಲ್ಲಾ ಮತ್ತು ತಾಲ್ಲೂಕು ಕಚೇರಿ ಆವರಣಗಳಲ್ಲಿ "ಅಕ್ಕ ಕೆಫೆ ಮತ್ತು ಕ್ಯಾಂಟೀನ್" ಸ್ಥಾಪಿಸಲಾಗುವುದು ಎಂದರು.

ಶಾಲೆ, ಅಂಗನವಾಡಿ, ವಸತಿ ನಿಲಯಗಳಿಗೆ ಮೊಟ್ಟೆ ಮತ್ತು ತರಕಾರಿ ಪೂರೈಸಲು ಸ್ವಸಹಾಯ ಸಂಘಗಳ "ಕಿರು ಉದ್ಯಮ"ಗಳನ್ನು ಪ್ರೋತ್ಸಾಹಿಸಲಾಗುವುದು. ಹಾಗೆಯೇ ಸ್ವಸಹಾಯ ಸಂಘಗಳ ಮೂಲಕ ಪ್ರತಿ ಜಿಲ್ಲೆಯಲ್ಲಿ ಒಂದು "ಸಮುದಾಯ ಪ್ರವಾಸಿ ಯೋಜನೆ" ಯನ್ನು ಅನುಷ್ಠಾನ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಬೀದರ್, ಯಾದಗಿರಿ, ವಿಜಯಪುರ, ಬಾಗಲಕೋಟೆ, ರಾಯಚೂರು, ಕೊಪ್ಪಳ, ಕೋಲಾರ, ಚಿತ್ರದುರ್ಗ ಹಾಗೂ ಚಿಕ್ಕಬಳ್ಳಾಪುರ ಭಾಗದ ರೈತರಿಗೆ ಅನುಕೂಲವಾಗಲಿದೆ.

- ರಾಜ್ಯದ ಎಲ್ಲ ನೊಂದಾಯಿತ ಗೃಹ ನಿರ್ಮಾಣ ಸಹಕಾರ ಸಂಘಗಳ ಮಾಹಿತಿಯನ್ನು ಕರ್ನಾಟಕ ರಾಜ್ಯ ಸಹಕಾರ ವಸತಿ ಮಹಾಮಂಡಳದ ವತಿಯಿಂದ ಆನ್‌ಲೈನ್‌ನಲ್ಲಿ ಅಳವಡಿಸಲಾಗುವುದು.
- ಸಹಕಾರ ಬ್ಯಾಂಕುಗಳಲ್ಲಿನ ಠೇವಣಿದಾರರ ಹಿತಾಸಕ್ತಿಯನ್ನು ಕಾಪಾಡಲು ಹಾಗೂ ಅವ್ಯವಹಾರವನ್ನು ತಡೆಯಲು ಸಹಾಯವಾಣಿಯನ್ನು ಪ್ರಾರಂಭಿಸಲಾಗುವುದು.
- ಸಹಕಾರ ಸಂಘಗಳ ಲೆಕ್ಕ ಪರಿಶೋಧನೆ ವರದಿಗಳನ್ನು ಡಿಜಿಟಲೀಕರಣ ಗೊಳಿಸಲಾಗುವುದು.
- ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಅಪೂರ್ಣಗೊಂಡಿರುವ ಉಗ್ರಾಣಗಳ ನಿರ್ಮಾಣ ಹಾಗೂ ಮೂಲಸೌಕರ್ಯ ಕಾಮಗಾರಿಗಳನ್ನು ಪೂರ್ಣಗೊಳಿಸಲು 376 ಕೋಟಿ ರೂ. ಸಹಾಯಾನುದಾನವನ್ನು ಹಿಂದಿನ ಆಯವ್ಯಯದಲ್ಲಿ ಘೋಷಿಸಿದ್ದೇನೆ. ಅದರಂತೆ ಈಗಾಗಲೇ 329 ಕೋಟಿ ರೂ. ಬಿಡುಗಡೆಗೊಳಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ, ಬಾಕಿ ಇರುವ 47 ಕೋಟಿ ರೂ. ಮೊತ್ತವನ್ನು ಒದಗಿಸಲಾಗುವುದು.
- ರಾಜ್ಯದ ಎಲ್ಲ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಪರವಾನಿಗೆ ಪಡೆದು ಕಾರ್ಯನಿರ್ವಹಿಸುತ್ತಿರುವ ಶ್ರಮಿಕರು ಮೃತರಾದಾಗ ಅವರ ವಾರಸುದಾರರಿಗೆ 1 ಲಕ್ಷ ರೂ. ವಿಮಾ ಮೊತ್ತವನ್ನು ನೀಡಲಾಗುತ್ತಿದ್ದು, ಈ ವಿಮಾ ಮೊತ್ತವನ್ನು 5 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುವುದು.
- ಬೆಂಗಳೂರಿನಲ್ಲಿರುವ ಮಾರುಕಟ್ಟೆ ಸಮಿತಿಗಳಲ್ಲಿ ವಾಹನಗಳ ದಟ್ಟಣೆ ಹೆಚ್ಚಾಗಿರುವುದರಿಂದ ಬೆಂಗಳೂರಿನ ಹೊರವಲಯದಲ್ಲಿ ಹೊಸ Satellite Market ಅನ್ನು ಸ್ಥಾಪಿಸಲಾಗುವುದು.
- ಕೊಪ್ಪಳ ಜಿಲ್ಲೆಯ ಬೂದುಗುಂಪ ಗ್ರಾಮದಲ್ಲಿ ಕುರಿ ಮತ್ತು ಮೇಕೆ ಮಾರುಕಟ್ಟೆಯನ್ನು KKRDB ವತಿಯಿಂದ 25 ಕೋಟಿ ರೂ. ವೆಚ್ಚದಲ್ಲಿ ಅಗತ್ಯ ಮೂಲಸೌಲಭ್ಯಗಳೊಂದಿಗೆ ಸ್ಥಾಪಿಸಲಾಗುವುದು.




- ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೈನುಗಾರಿಕೆಯನ್ನು ಉತ್ತೇಜಿಸಲು 10 ಕೋಟಿ ರೂ. ಅನುದಾನವನ್ನು ಪ್ರಥಮ ಹಂತದಲ್ಲಿ ನೀಡಲಾಗುವುದು. ಕಲಬುರಗಿಯಲ್ಲಿ ನೂತನ ಮೆಗಾ ಡೈರಿಯನ್ನು ಪ್ರಾರಂಭಿಸಲು ಕೆಕೆಆರ್‌ಡಿಬಿ ವತಿಯಿಂದ 50 ಕೋಟಿ ರೂ. ಅನುದಾನ ಒದಗಿಸಲಾಗುವುದು.
- ಕೆಕೆಆರ್‌ಡಿಬಿ ವತಿಯಿಂದ ಕಲಬುರಗಿಯಲ್ಲಿ ಪ್ರಾದೇಶಿಕ ಸಹಕಾರ ಭವನವನ್ನು 10 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿದೆ.
- ಕೆಕೆಆರ್‌ಡಿಬಿ ಸಹಯೋಗದಿಂದ ಗ್ರಾಮೀಣ ಉಗ್ರಾಣಗಳನ್ನು 60 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಾಗುವುದು.
- ಕುರಿ ಮತ್ತು ಮೇಕೆ ಸಾಕಾಣಿಕೆದಾರರಿಗೆ ಅನುವಾಗುವಂತೆ ಬೆಂಗಳೂರಿನಲ್ಲಿ ಸುಸಜ್ಜಿತ ಕುರಿ ಮತ್ತು ಮೇಕೆ ಮಾರುಕಟ್ಟೆಯನ್ನು ಪ್ರಾರಂಭಿಸಲಾಗುವುದು.
- ಚಿಕ್ಕಬಳ್ಳಾಪುರದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ವತಿಯಿಂದ ಅಂತಾರಾಷ್ಟ್ರೀಯ ಮಟ್ಟದ ಹೈಟೆಕ್‌ಹೂವಿನ ಮಾರುಕಟ್ಟೆಯನ್ನು ಹಾಗೂ ಕೆ.ಜಿ.ಎಫ್.ನಲ್ಲಿ ರೈತರ ಆಧುನಿಕ ಮಾರುಕಟ್ಟೆಯನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು.

# ಕರ್ನಾಟಕವನ್ನು ದೇಶದ ನಂ.1 ಆರ್ಥಿಕತೆಯನ್ನಾಗಿ ಮಾಡುವತ್ತ ದಿಟ್ಟ ಹೆಜ್ಜೆ : ಸಿದ್ದರಾಮಯ್ಯ



**ಬೆಂಗಳೂರು** : ಕರ್ನಾಟಕವನ್ನು ದೇಶದ ನಂ.1 ಆರ್ಥಿಕತೆಯನ್ನಾಗಿ ಮಾಡುವತ್ತ ನಾವು ದಿಟ್ಟ ಹೆಜ್ಜೆಯಿಟ್ಟಿದ್ದೇವೆ. ನಾನು ಈವರೆಗೂ ಮಂಡಿಸಿರುವ ಪ್ರತಿ ಬಜೆಟ್‌ನಲ್ಲಿಯೂ ವಿತ್ತೀಯ ಶಿಸ್ತನ್ನು ಪಾಲಿಸುವುದರ ಜೊತೆಗೆ ಬಡವರ, ಮಹಿಳೆಯರ, ಶೋಷಿತರ, ದುರ್ಬಲ ವರ್ಗದವರ ಏಳಿಗೆಗೆ ಜನಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದೇನೆ. ಅಲ್ಲದೆ, ರಾಜ್ಯದ ಆರ್ಥಿಕ ಪ್ರಗತಿಗಾಗಿ ಬಂಡವಾಳ ಯೋಜನೆಗಳಿಗೆ ಹೆಚ್ಚಿನ ಅನುದಾನ ನೀಡಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವಿಧಾನಸಭೆಯಲ್ಲಿ ಬಜೆಟ್ ಮಂಡನೆ ಬಳಿಕ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, 2025–26ನೇ ಸಾಲಿನ ಆಯವ್ಯಯ ಗಾತ್ರವು 4,09,549 ಕೋಟಿ ರೂ.ಗಳಾಗಿರುತ್ತದೆ. ಮೊದಲ ಬಾರಿಗೆ ನಮ್ಮ ರಾಜ್ಯದ ಆಯವ್ಯಯ ಗಾತ್ರ 4 ಲಕ್ಷ ಕೋಟಿ ರೂ.ಗಳ ಗಡಿ ದಾಟಿರುವುದು, ಒಂದು ಹೊಸ ಮೈಲುಗಲ್ಲು. 2024–25ನೇ ಸಾಲಿನ ಆಯವ್ಯಯಕ್ಕೆ ಹೋಲಿಸಿದರೆ 2025–26ನೇ ಸಾಲಿನಲ್ಲಿ ಆಯವ್ಯಯ ಗಾತ್ರವು ಶೇ.10.3 ರಷ್ಟು ಹೆಚ್ಚಳವಾಗಿದೆ ಎಂದು ಅವರು ಹೇಳಿದರು.

ಕಳೆದ ಎರಡು ವರ್ಷಗಳಲ್ಲಿ ರಾಜ್ಯದ ಆಯವ್ಯಯ ಗಾತ್ರವು ಗಣನೀಯವಾಗಿ ಹೆಚ್ಚಳವಾಗಿದೆ. 2022–23ರಲ್ಲಿ 2,65,720 ಕೋಟಿ ರೂ.ಗಳಷ್ಟಿದ್ದ ಆಯವ್ಯಯ ಗಾತ್ರವು 2025–26ರ ಆಯವ್ಯಯದಲ್ಲಿ 4,09,549 ಕೋಟಿ ರೂ.ಗಳಿಗೆ ಹೆಚ್ಚಳವಾಗಿದೆ. ನಮ್ಮ ಸರಕಾರವು ಅಧಿಕಾರಕ್ಕೆ ಬಂದ ಆರಂಭದಲ್ಲಿ ವಿಪಕ್ಷದವರು ಗ್ಯಾರಂಟಿ ಯೋಜನೆಗಳನ್ನು ಟೀಕಿಸಿದರು ಹಾಗೂ ಈ ಯೋಜನೆಗಳು ಯಶಸ್ವಿಯಾಗುವುದಿಲ್ಲ ಎಂಬ ನಕಾರಾತ್ಮಕ ಧೋರಣೆ ವ್ಯಕ್ತಪಡಿಸಿದರು ಎಂದು ಸಿದ್ದರಾಮಯ್ಯ ತಿಳಿಸಿದರು.

ಆದರೆ ನಮ್ಮ ಸರಕಾರವು ಅಧಿಕಾರಕ್ಕೆ ಬಂದಾಗಿನಿಂದ ಅಗತ್ಯ ಅನುದಾನ ಒದಗಿಸುವ ಮೂಲಕ ಐದು ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿದೆ. 2025–26ನೇ ಆಯವ್ಯಯದಲ್ಲಿ ಗ್ಯಾರಂಟಿ ಯೋಜನೆಗಳಿಗೆ ಒಟ್ಟು 51,034 ಕೋಟಿ ರೂ.ಗಳ ಅನುದಾನ ಒದಗಿಸಲಾಗಿದೆ. ಗ್ಯಾರಂಟಿ ಯೋಜನೆಗಳನ್ನು ಟೀಕಿಸಿದ ವಿಪಕ್ಷದವರು ಈಗ ತಾವು ಆಡಳಿತದಲ್ಲಿರುವ ರಾಜ್ಯಗಳಲ್ಲಿ ನಮ್ಮ ರಾಜ್ಯದ ಮಾದರಿಯಲ್ಲಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಎಂದು ಮುಖ್ಯಮಂತ್ರಿ ಹೇಳಿದರು. ಬಂಡವಾಳ ಯೋಜನೆಗಳಿಗೆ ನೀಡಿರುವ ಒಟ್ಟು ಅನುದಾನವು 2024–25ರಲ್ಲಿ ಅಂದಾಜಿಸಿದ್ದ 56,492 ಕೋಟಿ ರೂ.ಗಳಿಂದ 2025–26ನೇ ಸಾಲಿನಲ್ಲಿ 83,200 ಕೋಟಿ ರೂ.ಗಳಿಗೆ ಹೆಚ್ಚಳವಾಗಿದೆ. ಇದು ಕಳೆದ ವರ್ಷಕ್ಕೆ ಹೋಲಿಸಿದರೆ ಶೇ. 47.3 ರಷ್ಟು ಹೆಚ್ಚಳವನ್ನು ಕಂಡಿದೆ. ಇದು ರಾಜ್ಯದ ಒಟ್ಟಾರೆ ಜಿಎಸ್‌ಡಿಪಿಯ ಶೇ.2.32 ರಷ್ಟಿದೆ. ಕಳೆದ ವರ್ಷ ಇದು ಶೇ.1.99 ರಷ್ಟಿತ್ತು. ಜಿಎಸ್‌ಡಿಪಿಯ ಹೆಚ್ಚಳಕ್ಕೆ ಅನುಗುಣವಾಗಿ ರಾಜ್ಯದ ಬಂಡವಾಳವನ್ನು ಹೆಚ್ಚಿಸಲಾಗಿದೆ ಎಂದು ಸಿದ್ದರಾಮಯ್ಯ ತಿಳಿಸಿದರು.

2025–26ನೇ ಸಾಲಿನಲ್ಲಿ ಪ್ರಮುಖವಾಗಿ ನೀರಾವರಿ, ರಸ್ತೆ ಅಭಿವೃದ್ಧಿ, ಮೂಲಭೂತ ಸೌಕರ್ಯ ಮತ್ತು ಬೆಂಗಳೂರಿನ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಬೆಂಗಳೂರಿನ ಮೂಲಸೌಕರ್ಯ ಅಗತ್ಯಗಳನ್ನು ಪೂರೈಸಲು, ಮುಂದಿನ ಮೂರು ವರ್ಷಗಳಲ್ಲಿ 54 ಸಾವಿರ ಕೋಟಿ ರೂ.ಹೂಡಿಕೆಯೊಂದಿಗೆ 120 ಕಿ.ಮೀ. ಫ್ಲೈಓವರ್ ಮತ್ತು ಗ್ರೇಡ್ ಸೆಪರೇಟರ್, ಕಾಲುವೆಗಳ ಬಫರ್ ವಲಯಗಳ ಉದ್ದಕ್ಕೂ 320 ಕಿ.ಮೀ. ಹೊಸ ರಸ್ತೆಗಳು, ಹೆಚ್ಚು ವಾಹನ ಸಾಮರ್ಥ್ಯವಿರುವ ರಸ್ತೆಗಳ ಸುಧಾರಣೆ ಮತ್ತು ಡಬಲ್ ಡೆಕ್ಕರ್ ಫ್ಲೈಓವರ್ ನಂತಹ ಯೋಜನೆಗಳನ್ನು ಕೈಗೊಳ್ಳಲ್ಲಿದ್ದೇವೆ ಎಂದು ಅವರು ಹೇಳಿದರು.

ಇದಲ್ಲದೆ, ಬೆಂಗಳೂರಿಗೆ 27,000 ಕೋಟಿ ರೂ.ಗಳ ವೆಚ್ಚದಲ್ಲಿ ಹೊಸ ಪೆರಿಫೆರಲ್ ರಿಂಗ್ ರಸ್ತೆ ಮತ್ತು ವಾಹನ ದಟ್ಟಣೆಯನ್ನು ಕಡಿಮೆ ಮಾಡಲು 40 ಸಾವಿರ ಕೋಟಿ ರೂ.ಗಳ ವೆಚ್ಚದಲ್ಲಿ ಭೂ ಸುರಂಗ ರಸ್ತೆಯನ್ನು ನಿರ್ಮಿಸಲಾಗುವುದು. 2025–26ನೇ ಸಾಲಿನಲ್ಲಿ, ಬೆಂಗಳೂರಿನ ಮೂಲಸೌಕರ್ಯ ಅಭಿವೃದ್ಧಿಗಾಗಿ 7 ಸಾವಿರ ಕೋಟಿ ರೂ. ಅನುದಾನ ಒದಗಿಸಲಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು.

ಕೇಂದ್ರ ಸರಕಾರದಿಂದ ರಾಜ್ಯಕ್ಕೆ ರಾಜಸ್ವ ನಷ್ಟವಾಗಿದ್ದರೂ ಗ್ಯಾರಂಟಿ ಯೋಜನೆಗಳಿಗೆ ಅನುದಾನ ಒದಗಿಸುವುದರೊಂದಿಗೆ ಆಶಾ, ಅಂಗನವಾಡಿ ಕಾರ್ಯಕರ್ತರು, ಬಿಸಿಯೂಟ ತಯಾರಕರು, ಅತಿಥಿ ಶಿಕ್ಷಕರು ಹಾಗೂ ಪದವಿ ಪೂರ್ವ ಉಪನ್ಯಾಸಕರ ಗೌರವಧನ ಮತ್ತು ಪತ್ರಕರ್ತರು, ಕಲಾವಿದರು, ಕುಸ್ತಿಪಟುಗಳ ಮಾಸಾಶನ ಹೆಚ್ಚಿಸಿ ಇತರೆ ಕಲ್ಯಾಣ ಕಾರ್ಯಕ್ರಮಗಳಿಗೂ ಅಗತ್ಯ ಅನುದಾನ ಒದಗಿಸಲಾಗಿದೆ ಎಂದು ಅವರು ತಿಳಿಸಿದರು.

ಈ ಎಲ್ಲಾ ವೆಚ್ಚ ನಿರ್ವಹಣೆ ಮಾಡುವುದರ ಜೊತೆಗೆ ಈ ಸಾಲಿನಲ್ಲಿ ರಾಜಸ್ವ ಕೊರತೆಯನ್ನು ಕಡಿಮೆ ಮಾಡಿರುವುದು ಹೆಮ್ಮೆಯ ಸಂಗತಿ. ಅಲ್ಲದೆ, ಮುಂದಿನ ವರ್ಷಗಳಲ್ಲಿ ನಮ್ಮ ಸರಕಾರವು ರಾಜಸ್ವ ಹೆಚ್ಚುವರಿಯನ್ನು ಸಾಧಿಸಲಿದೆ. ಆರ್ಥಿಕ ಬೆಳವಣಿಗೆಯ ಹಿತದೃಷ್ಟಿಯಿಂದ ಬಂಡವಾಳ ಯೋಜನೆಗಳಿಗೆ ಹೆಚ್ಚಿನ ಅನುದಾನ ಒದಗಿಸಿದರೂ ವಿತ್ತೀಯ ಶಿಸ್ತನ್ನು ಉಲಂಘಿಲ್ಲ ಎಂದು ಮುಖ್ಯಮಂತ್ರಿ ಹೇಳಿದರು.

# ತ್ಯಾಗರಾಜ ಕೋ-ಆಪರೇಟಿವ್ ಬ್ಯಾಂಕ್ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ : ಆರ್. ಅಶೋಕ್, ವಿಧಾನಸಭೆ ವಿರೋಧ ಪಕ್ಷದ ನಾಯಕ



**ಬೆಂಗಳೂರು :** ಶ್ರೀ ತ್ಯಾಗರಾಜ ಕೋ ಆಪರೇಟಿವ್ ಬ್ಯಾಂಕ್ ನಗರದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ವಜ್ರ ಮಹೋತ್ಸವ ಸಮಾರಂಭ ಉದ್ಘಾಟಿಸಿದ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಅವರು ಮಾತನಾಡಿ, ಬ್ಯಾಂಕಿಂಗ್ ಕ್ಷೇತ್ರದಲ್ಲಿ ಸದಸ್ಯರ, ಗ್ರಾಹಕರ ನಂಬಿಕೆಯೇ ಮುಖ್ಯ. ತ್ಯಾಗರಾಜ ಕೋ-ಆಪರೇಟಿವ್ ಬ್ಯಾಂಕ್ ಎಲ್ಲರ ವಿಶ್ವಾಸ ಉಳಿಸಿಕೊಂಡು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ನುಡಿದರು.

ನಂತರ ಮಾತನಾಡಿದ ವಿಧಾನ ಪರಿಷತ್‌ನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಅವರು, ಸಹಕಾರ ಬ್ಯಾಂಕ್ ಮತ್ತು ಸಹಕಾರಿ ಸಂಘಗಳು ರಾಜ್ಯದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುವ ಮೂಲಕ ಸರ್ಕಾರದ ಮೇಲಿನ ಆರ್ಥಿಕ ಹೊರೆ ಇಳಿಸಿವೆ ಎಂದು ಅಭಿಮತ ವ್ಯಕ್ತಪಡಿಸಿದರು.

ಸಹಕಾರಿ ಬ್ಯಾಂಕ್ ಮತ್ತು ಸಹಕಾರ ಸಂಘಗಳು ಇರದಿದ್ದರೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಮೇಲೆ ಆರ್ಥಿಕ ಹೊರೆ ಹೆಚ್ಚುತ್ತಿತ್ತು. ರಾಜ್ಯದಲ್ಲಿ 252 ಸಹಕಾರ ಬ್ಯಾಂಕ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಅವುಗಳ 1,200 ಶಾಖೆಗಳಿವೆ. ಲಕ್ಷಾಂತರ ಮಂದಿ ಈ ಬ್ಯಾಂಕುಗಳಲ್ಲಿ ಸಕ್ರಿಯವಾಗಿದ್ದು, ಜನರ ಜೀವನಮಟ್ಟ ಸುಧಾರಣೆಗೆ ಈ ಬ್ಯಾಂಕುಗಳು ನೆರವಾಗುತ್ತಿವೆ. ತ್ಯಾಗರಾಜ ಕೋ ಆಪರೇಟಿವ್ ಬ್ಯಾಂಕ್ ಕೂಡ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ತ್ಯಾಗರಾಜ ಕೋ ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಎಂ.ಆರ್. ವೆಂಕಟೇಶ್, ನಮ್ಮ ಬ್ಯಾಂಕ್ 14 ಶಾಖೆಗಳನ್ನು ಹೊಂದಿದ್ದು, 6 ಸಾವಿರ ಕೋಟಿ ವಹಿವಾಟು ನಡೆಸಲಾಗುತ್ತಿದೆ 125 ಕೋಟಿ ಸ್ವಂತ ಬಂಡವಾಳ ಹೊಂದಲಾಗಿದೆ ಸುಮಾರು 25 ಸಾವಿರ ಸದಸ್ಯರಿದ್ದಾರೆ. ರಾಷ್ಟ್ರೀಕೃತ ಬ್ಯಾಂಕುಗಳಿಗೆ ಸರಿಸಮಾನವಾಗಿ ಕೆಲಸ ಮಾಡಲಾಗುತ್ತಿದೆ. ಬ್ಯಾಂಕಿಂಗ್ ವ್ಯವಹಾರ ಸುಲಭಗೊಳಿಸಲು ಆಧುನಿಕ ತಂತ್ರಜ್ಞಾನಗಳನ್ನೂ ಅಳವಡಿಸಿಕೊಳ್ಳಲಾಗಿದೆ. ಸಹಕಾರ ಸಂತೆ ಪ್ರಾರಂಭಿಸಿ, ಸಣ್ಣ ಉದ್ದಿಮೆದಾರರಿಗೆ ಸಾಲ ನೀಡಲು ವೇದಿಕೆ ಒದಗಿಸಿದ್ದೇವೆ' ಎಂದು ನುಡಿದರು.

ಸಹಕಾರ ಬ್ಯಾಂಕುಗಳು ಸಂಕಷ್ಟಕ್ಕೆ ಸಿಲುಕಿದಾಗ ಬಲಪಡಿಸಲು ಪ್ರತ್ಯೇಕ ಸಂಘ ಸ್ಥಾಪನೆ, ಠೇವಣಿ ವಿಮಾ ಮಿತಿ ರೂ.10 ಲಕ್ಷಕ್ಕೆ ಏರಿಕೆ ಸೇರಿ ಸಹಕಾರ ಬ್ಯಾಂಕುಗಳ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿದ ಎಂ.ಆರ್. ವೆಂಕಟೇಶ್, ಮನವಿ ಪತ್ರವನ್ನು ಭಾರತೀಯ ರಿಸರ್ವ್ ಬ್ಯಾಂಕ್‌ನ ಕೇಂದ್ರ ಮಂಡಳಿಯ ನಿರ್ದೇಶಕ ಸತೀಶ್ ಮರಾಠೆ ಅವರಿಗೆ ಹಸ್ತಾಂತರಿಸಿದರು.

ಇದೇ ಸಮಾರಂಭದಲ್ಲಿ ತಿಪಟೂರಿನ ಮರ್ಚೆಂಟ್ ಕೋ ಅಪರೇಟಿವ್ ಬ್ಯಾಂಕಿಗೆ ಅತ್ಯುತ್ತಮ ಬ್ಯಾಂಕ್ ಪ್ರಶಸ್ತಿ, ತ್ಯಾಗರಾಜ ಕೋ ಆಪರೇಟಿವ್ ಬ್ಯಾಂಕಿನ ವ್ಯವಸ್ಥಾಪಕ ಉಮೇಶ್ ಹಾಗೂ ದಿ ಗಾಂಧಿ ಗುಂಜ್ ಕೋ ಅಪರೇಟಿವ್ ಬ್ಯಾಂಕಿನ ವ್ಯವಸ್ಥಾಪಕಿ ವಾಣಿ ಬಿರಾದರ್ ಅವರಿಗೆ ಅತ್ಯುತ್ತಮ ಸಿಬ್ಬಂದಿ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು. ಈ ಪ್ರಶಸ್ತಿಗಳು ಕ್ರಮವಾಗಿ ರೂ.25 ಸಾವಿರ ಹಾಗೂ ರೂ.10 ಸಾವಿರ ನಗದು ಒಳಗೊಂಡಿವೆ.

ಈ ಸಮಾರಂಭದಲ್ಲಿ ಮಹಾಮಂಡಳದ ಮುಖ್ಯಕಾರ್ಯನಿರ್ವಹಣಾಧಿಕಾರಿ ಪುಂಡಲೀಕ ಎನ್. ಕೇರೂರೆಯವರು ಭಾಗವಹಿಸಿದ್ದರು.

# ಬೆಳ್ಮಣ್ಣಿನಲ್ಲಿ ಎಂ.ಸಿ.ಸಿ. ಬ್ಯಾಂಕಿನ ಹೊಸ ಶಾಖೆಯ ಉದ್ಘಾಟನೆ





113 ವರ್ಷಗಳ ಇತಿಹಾಸವಿರುವ ಎಂ.ಸಿ.ಸಿ. ಬ್ಯಾಂಕಿನ 19ನೇ ಶಾಖೆಯು ಬೆಳ್ಮಣ್ ಮುಖ್ಯರಸ್ತೆಯ ಎಲ್ವಿನ್ ಟವರ್ಸ್‌ನ ನೆಲ ಮಹಡಿಯಲ್ಲಿ 2025, ಮಾರ್ಚ್ 2ರಂದು ಉದ್ಘಾಟನೆಗೊಂಡಿತು. ನೂತನ ಶಾಖೆಯನ್ನು ಕರ್ನಾಟಕ ವಿಧಾನ ಪರಿಷತ್‌ನ ಶಾಸಕ ಶ್ರೀ ಐವನ್ ಡಿಸೋಜ ಉದ್ಘಾಟಿಸಿದರು. ಬ್ಯಾಂಕಿನ ಅಧ್ಯಕ್ಷರಾದ ಸಹಕಾರ ರತ್ನ ಶ್ರೀ ಅನಿಲ್ ಲೋಬೊ ಅತಿಥಿಗಳೊಂದಿಗೆ ದೀಪ ಬೆಳಗಿಸಿದರು. ನೂತನ ಶಾಖೆಯನ್ನು ಸಂತ ಜೋಸೆಫ್ ಚರ್ಚ್ ಬೆಳ್ಮಣ್‌ನ ಧರ್ಮಗುರು ವಂ. ಫಾ| ಫ್ರೆಡ್ರಿಕ್ ಮಸ್ಕರೆನ್ಹಸ್ ಆಶೀರ್ವದಿಸಿದರು. ಭದ್ರತಾ ಕೊಠಡಿಯನ್ನು ದಾಯ್ಜಿವಲ್ಡ್ ಮೀಡಿಯಾ ಪ್ರೈ. ಲಿ. ಇದರ ಸಂಸ್ಥಾಪಕರಾದ ಶ್ರೀ ವಾಲ್ಟರ್ ನಂದಳಿಕೆ ಉದ್ಘಾಟಿಸಿದರು. ಇ-ಸ್ಟಾಂಪಿಂಗ್ ವ್ಯವಸ್ಥೆಯನ್ನು ಬೆಳ್ಮಣ್ ಗ್ರಾಮ ಪಂಚಾಯತ್ ಅಧಕ್ಷರಾದ ಶ್ರೀಮತಿ ರಾಮೇಶ್ವರಿ ಎಮ್. ಶೆಟ್ಟಿ ಉದ್ಘಾಟಿಸಿದರು. ಅನಿವಾಸಿ ಉಧ್ಯಮಿ ಶ್ರೀ ರೋನ್ ರೊಡ್ರಿಗಸ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸಭಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಅನಿಲ್ ಲೋಬೊ ವಹಿಸಿ, ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಬ್ಯಾಂಕಿನ ಸೇವೆ ಮತ್ತು ಸೌಲಭ್ಯಗಳನ್ನು ಪರಿಚಯಿಸಲು ಬೆಳ್ಮಣ್ ಪರಿಸರದಲ್ಲಿ ಬ್ಯಾಂಕಿನ ಸಿಬ್ಬಂದಿಗಳು ಭೇಟಿ ಮಾಡಿದ ಸಂದರ್ಭದಲ್ಲಿ ಬೆಳ್ಮಣ್ ಪರಿಸರದ ಜನರು ನೀಡಿದ ಸ್ವಾಗತ, ಸಹಕಾರ ಮತ್ತು ಬೆಂಬಲಕ್ಕಾಗಿ ವಂದನೆಗಳನ್ನು ಸಲ್ಲಿಸಿದರು. ನೂತನ ಶಾಖೆಯನ್ನು ಆಶೀರ್ವಚನಗೈದು ಮಾತನಾಡಿದ ವಂ. ಫಾ| ಫ್ರೆಡ್ರಿಕ್ ಮಸ್ಕರೆನ್ಹಸ್ ಬೆಳ್ಮಣ್‌ನಲ್ಲಿ ನೂತನ ಶಾಖೆಯನ್ನು ಆರಂಭಿಸಿ ಗ್ರಾಹಕ ಸ್ನೇಹಿ ವಾತಾವರಣವನ್ನು ಒದಗಿಸಿದ ಬ್ಯಾಂಕಿನ ಆಡಳಿತ ಮಂಡಳಿ ಮತ್ತು ಸಿಬ್ಬಂದಿಯನ್ನು ಅಭಿನಂದಿಸಿದರು. ಬ್ಯಾಂಕಿನ ಮುಂದಿನ ಯೋಜನೆಗಳಿಗೆ ಆಶೀರ್ವಾದವನ್ನು ಕೋರಿ ಸಮಾಜದಲ್ಲಿ ವಿಶೇಷವಾಗಿ ಬಡವರು ಮತ್ತು ಕೆಳವರ್ಗದ ಜನರಿಗೆ ಬ್ಯಾಂಕ್ ವರದಾನವಾಗಲಿ ಎಂದು ಹಾರೈಸಿದರು.

ಸಂದರ್ಭದಲ್ಲಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಶ್ರೀ ಐವನ್ ಡಿಸೋಜರವರು ಬೆಳ್ಮಣ್‌ನಲ್ಲಿ ಹೊಸ ಶಾಖೆಯನ್ನು ತೆರೆದಿರುವ ಬ್ಯಾಂಕಿಗೆ ಅಭಿನಂದನೆ ಸಲ್ಲಿಸಿದರು. ಬ್ಯಾಂಕ್ ವಿಶ್ವಾಸದಿಂದ ನಡೆಯುತ್ತಿದೆ. ಬೆಳ್ಮಣ್‌ನ ಜನತೆ ಎಂ.ಸಿ.ಸಿ. ಬ್ಯಾಂಕಿನ ಶಾಖೆಗಾಗಿ ಕಾಯುತ್ತಿದ್ದು, ಶಾಖೆಯನ್ನು ಆರಂಭಿಸಿದ ಬ್ಯಾಂಕಿನ ಅಧ್ಯಕ್ಷ ಮತ್ತು ಆಡಳಿತ ಮಂಡಳಿಗೆ ಶುಭ ಹಾರೈಸಿದರು. ಬ್ಯಾಂಕ್ ಕಳೆದ ವರ್ಷಗಳಲ್ಲಿ ಉತ್ತಮ ಪ್ರಗತಿಯನ್ನು ಕಂಡಿದೆ, ಮುಂದೆಯು ಬ್ಯಾಂಕಿನ ವ್ಯವಹಾರ ವೃದ್ಧಿಯಾಗಲಿ ಎಂದು ಹಾರೈಸಿ ಮುಂದಿನ ಎಲ್ಲಾ ಪ್ರಯತ್ನಗಳಿಗೆ ತಮ್ಮ ಸಹಕಾರ ಮತ್ತು ಬೆಂಬಲದ ಭರವಸೆಯನ್ನು ನೀಡಿದರು.

ನಿರ್ದೇಶಕರಾದ ಶ್ರೀ ಡೆವಿಡ್ ಡಿಸೋಜ, ಶ್ರೀ ಅನಿಲ್ ಪತ್ರಾವೊ, ಶ್ರೀ ಮೆಲ್ವಿನ್ ವಾಸ್, ಶ್ರೀ ರೋಶನ್ ಡಿಸೋಜ, ಡಾ| ಫ್ರೀಡಾಡಿಸೋಜ, ಡಾ| ಜೆರಾಲ್ಡ್ ಪಿಂಟೊ, ಶ್ರೀ ಎಲ್‌ರೊಯ್ ಕಿರಣ್ ಕ್ರಾಸ್ತೊ, ಶ್ರೀ ಜೆ.ಪಿ. ರೊಡ್ರಿಗಸ್, ಶ್ರೀ ಸಿ.ಜಿ.ಪಿಂಟೊ, ಶ್ರೀ ವಿನ್ಸೆಂಟ್ ಲಸ್ರಾದೊ, ಶ್ರೀ ಸುಶಾಂತ್ ಸಲ್ಡಾನ್ಹಾ, ಶ್ರೀ ಆಲ್ವಿನ್ ಪಿ. ಮೊಂತೇರೊ, ಶ್ರೀಮತಿ ಶರ್ಮಿಳಾ ಮಿನೇಜಸ್, ಶ್ರೀ ಫೆಲಿಕ್ಸ್‌ಡಿಕ್ರುಜ್, ಮಹಾಪ್ರಬಂಧಕರಾದ ಶ್ರೀ ಸುನಿಲ್ ಮಿನೇಜಸ್ ಹಾಜರಿದ್ದರು. ಉಪಾಧ್ಯಕ್ಷರಾದ ಶ್ರಿ ಜೆರಾಲ್ಡ್‌ಜೂಡ್ ಡಿಸಿಲ್ವಾ ಸ್ವಾಗತಿಸಿ, ಶಾಖಾ ವ್ಯವಸ್ಥಾಪಕಿ ಶ್ರೀಮತಿ ಶೈನಿ ಲಸ್ರಾದೊ ವಂದಿಸಿದರು. ಶ್ರೀ ಎಲ್ಸನ್ ಹಿರ್ಗಾನ್ ನಿರೂಪಿಸಿದರು.

# ಶ್ರೀ ಲಕ್ಷ್ಮೀ ಮಹಿಳಾ ಸಹಕಾರ ಬ್ಯಾಂಕಿನ ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಅವಿರೋಧ ಆಯ್ಕೆ



ಡಾ. ವಾಸವಿ ರಂಗಧಾಮ
ಅಧ್ಯಕ್ಷರು

**ಬೆಂಗಳೂರು:** ಶ್ರೀ ಲಕ್ಷ್ಮೀ ಮಹಿಳಾ ಸಹಕಾರ ಬ್ಯಾಂಕ್ ನಿಯಮಿತ, ಇದರ ಮುಂದಿನ ಐದು ವರ್ಷಗಳ 2025–2030ರ ಅವಧಿಗೆ ದಿನಾಂಕ : 16.02.2025ರಂದು ಜರುಗಿ ನೂತನ ಆಡಳಿತ ಮಂಡಳಿಯು ಅವಿರೋಧವಾಗಿ ಆಯ್ಕೆಯಾಗಿದ್ದು, ನಂತರ ದಿನಾಂಕ : 27.02.2025ರಂದು ಜರುಗಿದ ಪದಾಧಿಕಾರಿಗಳ ಚುನಾವಣೆಯಲ್ಲಿ ಬ್ಯಾಂಕಿನ ಅಧ್ಯಕ್ಷರಾಗಿ ಡಾ. ವಾಸವಿ ರಂಗಧಾಮ್ ಮತ್ತು ಉಪಾಧ್ಯಕ್ಷರಾಗಿ ಶ್ರೀಮತಿ ನಿರ್ಮಲ ಎ ರವರು ಅವಿರೋಧವಾಗಿ ಆಯ್ಕೆಯಾಗಿರುತ್ತಾರೆ. ಬ್ಯಾಂಕಿನ ನಿರ್ದೇಶಕರುಗಳಾಗಿ ಶ್ರೀಮತಿ ಅಂಜಲಿ, ಶ್ರೀಮತಿ ಪವಿತ್ರಾ ಶ್ರೀನಾಥ್, ಡಾ: ಸುಬ್ಬಲಕ್ಷ್ಮೀ ಬಿ.ಎಸ್., ಶ್ರೀಮತಿ ವಿಜಯ ಜಿ ಅಗಡಿ, ಶ್ರೀಮತಿ ವಿಧ್ಯಾ ವಿನಯ್ ಸರ್ವೋತಮ್, ಶ್ರೀಮತಿ ವಿಜಯಲಕ್ಷ್ಮೀ ಜಿ, ಶ್ರೀಮತಿ ಸಂಧ್ಯಾ ಹೆಚ್, ಶ್ರೀಮತಿ ಲಕ್ಷ್ಮೀ ಕೆ.ಹೆಚ್, ಶ್ರೀ ಮಂಜುನಾಥ್ ಆರ್.ಎಸ್. ರವರುಗಳು ಆಯ್ಕೆಯಾಗಿರುತ್ತಾರೆಂದು ಬ್ಯಾಂಕಿನ ಮುಖ್ಯಕಾರ್ಯನಿರ್ವಹಣಾಧಿಕಾರಿಯಾದ ಶ್ರೀ ಗೋವಿಂದಯ್ಯ ಟಿ. ರವರು ತಿಳಿಸಿರುತ್ತಾರೆ.



ಶ್ರೀಮತಿ ನಿರ್ಮಲ ಎ.
ಉಪಾಧ್ಯಕ್ಷರು

## ನಿಮ್ಮ ಪ್ರಶ್ನೆ ನಮ್ಮ ಉತ್ತರ






▸▸ **ಸುಧಾಕರ್ ಭಟ್,** ಬ್ಯಾಂಕಿಂಗ್ ಸಲಹೆಗಾರರು.

**01. ನಮ್ಮ ಬ್ಯಾಂಕಿನಲ್ಲಿ ರೂ.10 ಕೋಟಿ ಮೌಲ್ಯದ ಬ್ಯಾಂಕೇತರ ಸ್ವತ್ತುಗಳು (Non-Banking Assets) ಇವೆ. ಈ ಸ್ವತ್ತುಗಳನ್ನು ಹರಾಜಿನ ಮುಖಾಂತರ ಮಾರಾಟ ಮಾಡಲು ನಿರ್ಧರಿಸಿದ್ದೇವೆ. ಇವುಗಳ ಮಾರಾಟಕ್ಕೆ ಸಹಕಾರ ಇಲಾಖೆಯ ಅನುಮತಿ ಅಗತ್ಯವೇ? ಈ ಬಗ್ಗೆ ನಮಗೆ ಮಾರ್ಗದರ್ಶನ ಮಾಡಿ.**

**– ಪಟ್ಟಣ ಸಹಕಾರ ಬ್ಯಾಂಕ್ ಲಿ., ಬೆಂಗಳೂರು.**

**ಉತ್ತರ:** ಭಾರತೀಯ ರಿಜರ್ವ್ ಬ್ಯಾಂಕಿನ ಮಾರ್ಗಸೂಚಿ ಮತ್ತು ಬ್ಯಾಂಕಿಂಗ್ ನಿಯಂತ್ರಣ ಕಾಯ್ದೆಯ ಪ್ರಾವಧಾನದಂತೆ ಬ್ಯಾಂಕೇತರ ಸ್ವತ್ತುಗಳನ್ನು ಹೊಂದಿದ ದಿನಾಂಕದಿಂದ ಏಳು ವರ್ಷಗಳೊಳಗೆ ಮಾರಾಟ ಮಾಡಬೇಕು. ಇವುಗಳ ಮಾರಾಟಕ್ಕೆ ಸಹಕಾರ ಇಲಾಖೆಯ ಅನುಮತಿಯ ಅಗತ್ಯವಿಲ್ಲ. ಮಾರಾಟ ಮಾಡಲು ಆಡಳಿತ ಮಂಡಳಿಗೆ ಪೂರ್ಣ ಅಧಿಕಾರವಿದೆ.

**02. ನಮ್ಮ ಈ ಕೆಳಗಿನ ಪ್ರಶ್ನೆಗಳಿಗೆ ಸಮಾಧಾನ ನೀಡಿ.**

(i) ಪಟ್ಟಣ ಸಹಕಾರ ಬ್ಯಾಂಕುಗಳು ಸಂಸ್ಥೆಗಳು ಮತ್ತು ಟ್ರಸ್ಟ್‌ಗಳ ಹೆಸರಿನಲ್ಲಿ ಉಳಿತಾಯ ಖಾತೆಗಳನ್ನು ತೆರೆಯಬಹುದೇ?

(ii) ಕೃಷಿಯೇತರ ಭೂಮಿಯಾಗಿ ಪರಿವರ್ತಿಸಲಾದ ಭೂಮಿಯನ್ನು ಖರೀದಿಸಲು ಬ್ಯಾಂಕು ಸಾಲ ನೀಡಬಹುದೇ?

(iii) ಇನ್ನೆರಡು ತಿಂಗಳಲ್ಲಿ ನಮ್ಮ ಮಂಡಳಿಗೆ ಚುನಾವಣೆ ನಡೆಯಲಿದೆ. ಈ ಮಧ್ಯೆ ನಾವು ಅನುಕಂಪದ ಆಧಾರದ ಮೇಲೆ ನೇಮಕಾತಿಯನ್ನು ಮಾಡಬಹುದೇ?

**– ಪಟ್ಟಣ ಸಹಕಾರ ಬ್ಯಾಂಕ್ ಲಿ., ತುಮಕೂರು.**

ಉತ್ತರ: (i) ಟ್ರಸ್ಟ್‌ಗಳ ಮತ್ತು ಕರ್ನಾಟಕ ಸೊಸೈಟಿಗಳ ಕಾಯ್ದೆ, 1960ರ ಅಡಿಯಲ್ಲಿ ನೋಂದಾಯಿಸಲ್ಪಟ್ಟ ಸಂಸ್ಥೆಗಳ ಹೆಸರಿನಲ್ಲಿ ಪಟ್ಟಣ ಸಹಕಾರ ಬ್ಯಾಂಕುಗಳು ಉಳಿತಾಯ ಖಾತೆಗಳನ್ನು ತೆರೆಯಬಹುದು.

(ii) ಸ್ವಂತ ಮನೆ ಕಟ್ಟುವುದನ್ನು ಹೊರತುಪಡಿಸಿ ಬೇರೆಯಾವುದೇ ಉದ್ದೇಶಕ್ಕಾಗಿ ಭೂಮಿಯನ್ನು ಖರೀದಿಸಲು ಬ್ಯಾಂಕುಗಳು ಸಾಲ ನೀಡುವಂತಿಲ್ಲ.

(iii) ಮಂಡಳಿಯ ಚುನಾವಣಾ ವೇಳಾಪಟ್ಟಿ ಪ್ರಕಟವಾಗಿದ್ದರೆ, ಹಾಲಿ ಆಡಳಿತ ಮಂಡಳಿಯವರು ಯಾವುದೇ ತಾತ್ಕಾಲಿಕ ನೇಮಕಾತಿಗಳನ್ನು ಮಾಡತಕ್ಕದ್ದಲ್ಲ.

## ದಿ ಮೈಸೂರು ಮರ್ಚೆಂಟ್ಸ್ ಕೋ-ಆಪರೇಟಿವ್ ಬ್ಯಾಂಕಿಗೆ ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಅವಿರೋಧ ಆಯ್ಕೆ





ಶ್ರೀ ಸಿ.ವಿ. ಸೋಮಶೇಖರ್
ಅಧ್ಯಕ್ಷರು

**ಮೈಸೂರು :** ದಿ ಮೈಸೂರು ಮರ್ಚೆಂಟ್ಸ್ ಕೋ–ಆಪರೇಟಿವ್ ಬ್ಯಾಂಕಿನ ಮುಂದಿನ ಐದು ವರ್ಷಗಳ 2025–2030ರ ಅವಧಿಗೆ ಚುನಾವಣೆ ಜರುಗಿ ನೂತನ ಆಡಳಿತ ಮಂಡಳಿ ಆಯ್ಕೆಯಾಗಿದ್ದು, ನಂತರಜರುಗಿದ ಪದಾಧಿಕಾರಿಗಳ ಚುನಾವಣೆಯಲ್ಲಿ ಬ್ಯಾಂಕಿನ ಅಧ್ಯಕ್ಷರಾಗಿ ಶ್ರೀ ಸಿ.ವಿ. ಸೋಮಶೇಖರ್ ಮತ್ತು ಉಪಾಧ್ಯಕ್ಷರಾಗಿ ಶ್ರೀ ಎಂ.ಎನ್. ಮಹೇಶ್‌ರವರು ಅವಿರೋಧವಾಗಿ ಆಯ್ಕೆಯಾಗಿರುತ್ತಾರೆ.

ಬ್ಯಾಂಕಿನ ನಿರ್ದೇಶಕರುಗಳಾಗಿ ಶ್ರೀ ಆರ್.ಆನಂದ್, ಶ್ರೀ ಕೆ. ಪ್ರೇಮಕುಮಾರ್, ಶ್ರೀ ಬಿ.ಆರ್. ನಂದೀಶ್, ಮಹಾಮಂಡಳದ ನಿರ್ದೇಶಕರಾದ ಶ್ರೀ ಬಿ. ಕೋದಂಡರಾಮ, ಶ್ರೀ ಎ. ಪ್ರಭುಪ್ರಸಾದ್, ಶ್ರೀಮತಿ ಎನ್. ಸುಧಾ, ಶ್ರೀಮತಿ ಸಿ.ಎಸ್. ಗಂಗಾಂಬಿಕೆ, ಶ್ರೀ ಆರ್.ಪಿ. ಕೃಷ್ಣಮೂರ್ತಿ, ಶ್ರೀ ಎನ್. ಕಣ್ಣನ್, ಶ್ರೀ ಎನ್. ರಾಘವ, ಶ್ರೀ ಎಸ್. ರಾಚಪ್ಪಾಜಿ ರವರುಗಳು ಆಯ್ಕೆಯಾಗಿರುತ್ತಾರೆಂದು ಮುಖ್ಯಕಾರ್ಯನಿರ್ವಹಣಾಧಿಕಾರಿ ತಿಳಿಸಿರುತ್ತಾರೆ.



ಶ್ರೀ ಎಂ.ಎನ್. ಮಹೇಶ್
ಉಪಾಧ್ಯಕ್ಷರು

## ಒನ್‌ಲೈನ್ ನ್ಯೂಸ್

ಈ ಪುಟದಲ್ಲಿನ ಸುದ್ದಿಗಳನ್ನು ಓದಿದ್ದೀರಾ...?
**ಕುತೂಹಲಕಾರಿಯಾದ ಸುದ್ದಿಗಳು** ನಿಮ್ಮ ಕಣ್ಣು ತಪ್ಪಿದ್ದರೆ, ಇಲ್ಲಿವೆ ಓದಿ.

- ಬೆಂಗಳೂರಿನವರಾದ ವಸುಂಧರಾ ನಾಯ್ಕ್ ಅವರು ಕೆನಡಾದ ಒಂಟಾರಿಯೊದಲ್ಲಿರುವ ಫ್ಯಾಮಿಲಿ ಕೋರ್ಟ್ ಆಫ್ ಜಸ್ಟೀಸ್‌ನ ನ್ಯಾಯಾಧೀಶರಾಗಿ ನೇಮಕಗೊಂಡಿದ್ದಾರೆ. ಕಾನೂನು ವೃತ್ತಿಪರತೆಯಲ್ಲಿ ಅಂತರರಾಷ್ಟ್ರೀಯವಾಗಿ ತರಬೇತಿ ಪಡೆದಿರುವ ವಸುಂಧರಾ ನಾಯ್ಕ್ ಕೆನಡಾದಲ್ಲಿ ಹುಟ್ಟಿ, ಬೆಳೆದಿದ್ದು, ಮೊದಲು ಅವರು ಬೆಂಗಳೂರಿನ ಪ್ರತಿಷ್ಠಿತ ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿನಲ್ಲಿ ಅಧ್ಯಯನ ಮಾಡಿದ್ದಾರೆ.
- ಭಾರತದಲ್ಲಿ ಗೋಮಾಂಸ ಉತ್ಪಾದನೆ, ರಫ್ತಿನೆಡೆಗೆ ಭಾರತ ಸರ್ಕಾರದ ಪ್ರೋತ್ಸಾಹದಿಂದಾಗಿ 2025ರಲ್ಲಿ ಗೋಮಾಂಸ ಉತ್ಪಾದನೆ ಹಾಗೂ ರಫ್ತು ಹೆಚ್ಚಳವಾಗಿದೆ. 2024ರಲ್ಲಿ 4.57 ಮಿಲಿಯನ್ ಮೆಟ್ರಿಕ್ ಟನ್ ಇದ್ದ ಗೋಮಾಂಸ ಉತ್ಪಾದನೆ ಈ ವರ್ಷ 4.64 ಮಿಲಿಯನ್ ಮೆಟ್ರಿಕ್ ಟನ್‌ಗೆ ಏರಿಕೆಯಾಗಲಿದೆ.
- ಬಸವಣ್ಣನವರ ವಚನಗಳನ್ನು ಕನ್ನಡ ಬಲ್ಲವರಿಗೆ ಅಷ್ಟೇ ಅಲ್ಲ, ಇಡೀ ವಿಶ್ವಕ್ಕೆ ಅರ್ಥೈಸಬೇಕೆಂಬ ಉದ್ದೇಶದಿಂದ ವಿಜಯಪುರ ಜಿಲ್ಲೆಯ ಡಿವೈಎಸ್ಪಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವ ಬಸವರಾಜ ಎಲಿಗಾರ ಅವರು ವಚನಗಳನ್ನು ಇಂಗ್ಲೀಷ್ ಭಾಷೆಗೆ 'My Me is Thee' ಎಂದು ಅನುವಾದಿಸಿದ್ದಾರೆ.
- ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕಿನ ಬಸರಾಳು ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಸಮಾಜ ವಿಜ್ಞಾನ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದ ಕಲೀಮುಲ್ಲಾ ಅವರು ಐತಿಹಾಸಿಕ ದೇವಾಲಯ, ಶಾಸನ, ವೀರಗಲ್ಲುಗಳ ರಕ್ಷಣೆ ಹಾಗೂ ಅವುಗಳನ್ನು ಜೀರ್ಣೋದ್ಧಾರ ಮಾಡಲು ಮುಂದಾಗಿದ್ದಾರೆ.
- ದಕ್ಷಿಣ ಕೊರಿಯಾದ ಯುದ್ಧ ವಿಮಾನವೊಂದು ಲೈವ್–ಫೈರಿಂಗ್ ಕವಾಯತುಗಳಲ್ಲಿ ಭಾಗವಹಿಸಿದ್ದ ವೇಳೆ ಆಕಸ್ಮಿಕವಾಗಿ ತನ್ನ ದೇಶದ ಜನವಸತಿ ಪ್ರದೇಶದ ಮೇಲೇ ಎಂಟು ಬಾಂಬುಗಳನ್ನು ಬೀಳಿಸಿದ್ದರಿಂದ ಹಲವರು ಗಾಯಗೊಂಡಿರುವ ಘಟನೆ ನಡೆದಿದೆ.
- ಭಾರತದ ಎರಡನೇ ಅತಿದೊಡ್ಡ ಹಾಲು ಸಹಕಾರಿ ಸಂಸ್ಥೆಯಾದ ಕರ್ನಾಟಕದ ನಂದಿನಿ ಉತ್ಪನ್ನಗಳು ಇತ್ತೀಚೆಗೆ ರಾಷ್ಟ್ರ ರಾಜಧಾನಿ ದೆಹಲಿ ಮಾರುಕಟ್ಟೆ ಪ್ರವೇಶಿಸಿ ಜನಪ್ರಿಯತೆ ಗಳಿಸಿದ್ದು, ಇದೀಗ ಉತ್ತರ ಪ್ರದೇಶ, ರಾಜಸ್ಥಾನ ರಾಜ್ಯಗಳ ಮಾರುಕಟ್ಟೆಗಳಿಗೂ ಲಗ್ಗೆ ಇಟ್ಟಿದೆ.

## ಓದುಗರ ಅನಿಸಿಕೆ...




**ಆರ್ಥಿಕ ಹೊರೆ :** ರಾಜ್ಯದಲ್ಲಿ ಪ್ರಸ್ತುತ ಅಧಿಕಾರಕ್ಕೆ ಬಂದ ನಂತರದಲ್ಲಿ ಪ್ರತಿ ವರ್ಷ ಸಾಲದ ಪ್ರಮಾಣ ಏರುತ್ತಲೇ ಇದೆ. ನಿಜ, ಅವಶ್ಯವುಳ್ಳವರಿಗೆ ನೆರವು ನೀಡಲೇಬೇಕು. ಆದರೆ, ಗ್ಯಾರಂಟಿ ಯೋಜನೆಗಳ ಅನೇಕ ಫಲಾನುಭವಿಗಳು ಸಾಕಷ್ಟು ಅನುಕೂಲವಂತರಾಗಿದ್ದು, ವಿವಿಧ ಗ್ಯಾರಂಟಿ ಪ್ರಯೋಜನ ಪಡೆಯುತ್ತಿದ್ದಾರೆ. ಅವರುಗಳನ್ನು ಈ ಯೋಜನೆಗಳಿಂದ ಹೊರಗಿಡಬೇಕಿದೆ. ಇಲ್ಲದಿದ್ದಲ್ಲಿ ಇದು ಆರ್ಥಿಕ ಹೊರೆಯಾಗಿ ಪರಿಣಮಿಸುತ್ತದೆ.

**ಕಿರಣ್‌ರಾಜ್ ಬಿ.ಜಿ., ದಾವಣಗೆರೆ**

**ಹಿಂದಿರುಗದ ನೋಟುಗಳು :** ರಿಸರ್ವ್ ಬ್ಯಾಂಕಿಗೆ ರೂ.2000 ನೋಟುಗಳಲ್ಲಿ ಶೇ. 98.18 ರಷ್ಟು ನೋಟುಗಳು ವಾಪಸ್ ಮರಳಿದ್ದು, ಕೇವಲ 6,471 ಕೋಟಿ ರೂಪಾಯಿ ಮೌಲ್ಯದ 2000 ರೂ ಮುಖಬೆಲೆ ನೋಟುಗಳು ಇಂದಿಗೂ ಸಾರ್ವಜನಿಕರ ಬಳಿ ಇದೆ ಎಂದು ವರದಿಯಾಗಿದೆ. ಈ ನೋಟುಗಳನ್ನು ಎರಡು ವರ್ಷಗಳು ಕಳೆದಿದ್ದರೂ ಅನೇಕರು ಅದನ್ನು ಹಿಂದಿರುಗಿಸದೆ ಇನ್ನೂ ತಮ್ಮ ಬಳಿ ಇಟ್ಟುಕೊಂಡಿರುವುದೇಕೋ ತಿಳಿಯದು.

**ಎನ್. ಉಮಾಪತಿ, ತುಮಕೂರು.**

ಸಂಪಾದಕರು :
**ಪುಂಡಲೀಕ ಎನ್. ಕೇರೂರೆ,**
ಮುಖ್ಯಕಾರ್ಯನಿರ್ವಹಣಾಧಿಕಾರಿ,
ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ ನಿ.,
ಬೆಂಗಳೂರು.

**ಇವರಿಗೆ,**

Edited, Published and printed by Pundalik N. Kerure, C.E.O. on behalf of the
Karnataka State Co-operative Urban Banks Federation Ltd., Bangalore - 560027.
Published at : # 132, K.H. Road, Bangalore - 560027.
Printed at : Navarathna Printers, #35, 3rd Cross, Sudhamanagar, Bangalore - 560027.